**DECEMBER 02, 2024**
**AKASHAVANI - DHARWAD**
**REGIONAL NEWS BULLETIN (KANNADA) 07.05 A.M.**

ಮುಖ್ಯಾಂಶಗಳು

- ಕ್ರೀಡಾಪಟುಗಳಿಗೆ ಅಗತ್ಯ ಸೌಕರ್ಯ ಒದಗಿಸಲು ಸರ್ಕಾರ ಬದ್ಧ – ಮುಖ್ಯಮಂತ್ರಿ ಸಿದ್ದರಾಮಯ್ಯ
- ಸರ್ಕಾರಿ ಶಾಲೆಗಳ ಮೂಲಭೂತ ಸೌಲಭ್ಯಗಳಿಗೆ ಆದ್ಯತೆ – ಸಚಿವ ಎಚ್.ಕೆ.ಪಾಟೀಲ.
- ಸರ್ಕಾರಿ ಸ್ವಾಮ್ಯದ ಉದ್ಯಮಗಳನ್ನು ಲಾಭದತ್ತ ಮುನ್ನಡೆಸಲು ಸೂಕ್ತ ಕ್ರಮ – ಸಚಿವ ಎಂ.ಬಿ.ಪಾಟೀಲ್.
- ಚೆಕ್ ಡ್ಯಾಂಗಳ ಕಾಮಗಾರಿ ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆ ಸಚಿವ ಕೆ.ಎಚ್.ಮುನಿಯಪ್ಪ ಅಧಿಕಾರಿಗಳಿಗೆ ಸೂಚನೆ.

ಈಗ ವಾರ್ತೆಗಳ ವಿವರ

ರಾಜ್ಯದ ಕ್ರೀಡಾಪಟುಗಳಿಗೆ ಅಗತ್ಯ ಸೌಕರ್ಯ ನೀಡಲು ಸರ್ಕಾರ ಸದಾ ಸಿದ್ಧವಾಗಿದೆ. ರಾಜ್ಯ ಬಜೆಟ್‌ನಲ್ಲಿ ಕ್ರೀಡಾ ಕ್ಷೇತ್ರಕ್ಕೆ ನಿರಂತರ ಅನುದಾನ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕರ್ನಾಟಕ ಒಲಂಪಿಕ್ ಸಂಸ್ಥೆ ಆಯೋಜಿಸಿದ್ದ ಕ್ರೀಡಾ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ, ಮಾತನಾಡಿದ ಅವರು, ಶಾಲಾ ಮಕ್ಕಳು ಕ್ರೀಡೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳಲು ಅನುಕೂಲವಾಗುವಂತೆ ಕ್ರೀಡಾ ಮಕ್ಕಳಿಗೆ ಶೇಕಡ 25 ರಷ್ಟು ಹಾಜರಾತಿ ಮತ್ತು 10 ಕೃಪಾಂಕ ನೀಡುವಂತೆ ನಿಯಮ ರೂಪಿಸಲು ಮಾಡಿದ ಮನವಿ ನ್ಯಾಯೋಚಿತವಾಗಿದೆ. ಈ ಕುರಿತು ಪರಿಶೀಲಿಸಲಾಗುವುದು ಎಂದು ತಿಳಿಸಿದರು.

*******

ಗದಗ ಜಿಲ್ಲೆಯ ಎಲ್ಲ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಸಿದ್ಧವಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಹೇಳಿದ್ದಾರೆ. ಗದಗ ಜಿಲ್ಲೆಯ ಹಿರೇಹಂದಿಗೋಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ನೂತನವಾಗಿ ನಿರ್ಮಿಸಲಾದ ಪ್ರೌಢ ಹಾಗೂ ಪ್ರಾಥಮಿಕ ಶಾಲಾ ಕೊಠಡಿಗಳನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು, ದಿಲ್ಲಿಯಲ್ಲಿರುವ ಸರ್ಕಾರಿ ಶಾಲೆಗಳ ವ್ಯವಸ್ಥೆ ಹಾಗೂ ಫಲಿತಾಂಶ ಸುಧಾರಣೆ ಕುರಿತು ಅಧ್ಯಯನಕ್ಕಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಕಳುಹಿಸಿ ಕೊಡಲಾಗಿತ್ತು. ಅವರು ಅಧ್ಯಯನ ನಡೆಸಿ, ಗದಗ ಜಿಲ್ಲೆಯಲ್ಲಿ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ದಿಲ್ಲಿಯಲ್ಲಿರುವಂತೆ ಶಾಲೆಗಳು ಸುಧಾರಣೆಯಾಗಲು ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದರು.

*******

ಸರ್ಕಾರಿ ಸ್ವಾಮ್ಯದ ಉದ್ಯಮಗಳನ್ನು ಪ್ರೋತ್ಸಾಹಿಸಿ, ಲಾಭದತ್ತ ಮುನ್ನಡೆಸುವ ನಿಟ್ಟಿನಲ್ಲಿ ನಮ್ಮ ಸರ್ಕಾರವು ಕಾರ್ಯತಂತ್ರ ರೂಪಿಸಿದೆ ಎಂದು ಸಚಿವ ಎಮ್.ಬಿ.ಪಾಟಿಲ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿರುವ ಅವರು, ಈ ಹಿಂದಿನ ಸರ್ಕಾರದ ಸಂದರ್ಭದಲ್ಲಿ ಭ್ರಷ್ಟಾಚಾರದ ಸುಳಿಗೆ ಸಿಲುಕಿದ್ದ **KSDL**– ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ ಸಂಸ್ಥೆಯು ತಮ್ಮ ಸರ್ಕಾರದ ಸುಧಾರಣಾ ಕ್ರಮಗಳ ಪರಿಣಾಮ ಇದೀಗ ದಾಖಲೆ ಲಾಭಕ್ಕೆ ಮರಳಿದೆ ಎಂದು ತಿಳಿಸಿದ್ದಾರೆ. ಸಂಸ್ಥೆಯ ಆಡಳಿತ ಸುಧಾರಣೆ, ನೂತನ ಉತ್ಪನ್ನಗಳು, ಗುಣಮಟ್ಟ, ಮಾರುಕಟ್ಟೆಯ ತಂತ್ರಗಳನ್ನು ಅಳವಡಿಸಿಕೊಂಡ ಪರಿಣಾಮ, ವರ್ಷದಿಂದ ವರ್ಷಕ್ಕೆ ಸಂಸ್ಥೆ ಹೆಚ್ಚಿನ ಲಾಭ ಗಳಿಸುತ್ತಿದ್ದು, ರಾಜ್ಯದ ಬೊಕ್ಕಸ ಹೆಚ್ಚುತ್ತಿದೆ. ಕಳೆದ ವರ್ಷ 1 ಸಾವಿರದ 375 ಕೋಟಿ ರೂಪಾಯಿ ವಹಿವಾಟು ನಡೆಸಿದ್ದ ಸಂಸ್ಥೆ ಪ್ರಸಕ್ತ ವರ್ಷ ಈಗಾಗಲೇ 1 ಸಾವಿರದ 500 ಕೋಟಿ ಮೀರಿ ವಹಿವಾಟು ನಡೆಸಿದೆ. ಇದಲ್ಲದೆ, ಸಂಸ್ಥೆಯ ಉತ್ಪಾದನೆ ಮತ್ತು ಮಾರುಕಟ್ಟೆ ಸಾಮರ್ಥ್ಯ ವಿಸ್ತರಿಸಿಕೊಳ್ಳಲು ವಿನೂತನ ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದರು.

*******

ಹೀರೊ ಫ್ಯೂಚರ್ ಎನರ್ಜೀಸ್, ಕರ್ನಾಟಕದಲ್ಲಿ ನವೀಕರಿಸಬಲ್ಲ ಇಂಧನ, ಗ್ರೀನ್ ಹೈಡ್ರೋಜೆನ್, ಹಾಗೂ ಇತರೆ ಪೂರಕ ಯೋಜನೆಗಳು ಒಳಗೊಂಡಂತೆ 11 ಸಾವಿರ ಕೋಟಿ ರೂಪಾಯಿ ಮೊತ್ತದ ಯೋಜನೆಗಳಲ್ಲಿ ಹೂಡಿಕೆ ಮಾಡುವ ಸಂಬಂಧ ರಾಜ್ಯ ಸರ್ಕಾರದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದೆ ಎಂದು ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಇನ್ವೆಸ್ಟ್ ಕರ್ನಾಟಕ 2025 ರೋಡ್ ಮ್ಯಾಪ್‌ನ ಭಾಗವಾಗಿರುವ ಈ ಪ್ರಮುಖ ಹೂಡಿಕೆಯು, ರಾಜ್ಯದಲ್ಲಿ 3 ಸಾವಿರ ಉದ್ಯೋಗಗಳನ್ನು ಸೃಷ್ಟಿಸುವ ಗುರಿ ಹೊಂದಿದ್ದು, ಜೊತೆಗೆ ಡೀಕಾರ್ಬನೈಸೇಷನ್ ಉತ್ತೇಜಿಸಿ, ಕರ್ನಾಟಕವನ್ನು ಸ್ವಚ್ಛ ಇಂಧನ ಕ್ಷೇತ್ರದಲ್ಲಿ ಮೊದಲ ಸ್ಥಾನಕ್ಕೇರಿಸಲಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ.

*******

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಮಾಳಿಗೆಹಳ್ಳಿ – ಅತ್ತಿಬೆಲೆ ಬಳಿ ಸಣ್ಣ ನೀರಾವರಿ ಇಲಾಖೆ ವತಿಯಿಂದ ನಿರ್ಮಿಸಲಾಗುತ್ತಿರುವ 5 ಚೆಕ್ ಡ್ಯಾಂಗಳ ನಿರ್ಮಾಣದ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಭೂಮಿ ಪೂಜೆ ನೆರವೇರಿಸಿದರು. ಗ್ರಾಮಗಳಲ್ಲಿ ನೀರಿನ ಉಳಿತಾಯ ಮತ್ತು ಅಂತರ್ಜಲ ಮಟ್ಟ ಹೆಚ್ಚಿಸಲು 2 ಕೋಟಿ ರೂಪಾಯಿ ವೆಚ್ಚದಲ್ಲಿ ಒಟ್ಟು 5 ಚೆಕ್ ಡ್ಯಾಂಗಳನ್ನು, ಮಾಳಿಗೆಹಳ್ಳಿ, ಮಾಯಸಂದ್ರ, ವೆಂಕಟನಹಳ್ಳಿ, ಬೆಟ್ಟಕೋಟೆ, ವಿಜಯಪುರ ಗ್ರಾಮಗಳ ಬಳಿ ನಿರ್ಮಿಸಲಾಗುತ್ತಿದ್ದು, ಸುತ್ತ–ಮುತ್ತಲಿನ ರೈತರು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗಲಿದೆ. ಚೆಕ್ ಡ್ಯಾಂಗಳ ಕಾಮಗಾರಿ ಗುಣಮಟ್ಟ ಕಾಪಾಡಿಕೊಳ್ಳುವುದರೊಂದಿಗೆ, ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

*******

ಹಾವೇರಿ ಜಿಲ್ಲೆ ಶಿಗ್ಗಾಂವಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ 8 ಮತ್ತು 9 ನೇ ಘಟಿಕೋತ್ಸವ ಕಾರ್ಯಕ್ರಮ ಇಂದು ನಡೆಯಲಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪದವಿ ಪ್ರದಾನ ಮಾಡಲಿದ್ದಾರೆ ಎಂದು ವಿಶ್ವವಿದ್ಯಾಲಯದ ಕುಲಪತಿ ಪ್ರೊಫೆಸರ್ ಟಿ.ಎಂ ಭಾಸ್ಕರ್ ತಿಳಿಸಿದ್ದಾರೆ. ಹಾವೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಂಧ್ರಪ್ರದೇಶದ ಕೇಂದ್ರೀಯ ಬುಡಕಟ್ಟು ವಿಶ್ವವಿದ್ಯಾಲಯದ ಕುಲಪತಿ ಪ್ರೊಫೆಸರ್ ಟಿ.ವಿ ಕಟ್ಟಿಮನಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ಉನ್ನತ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಎಂ.ಸಿ. ಸುಧಾಕರ್ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಆರು ಜನರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಗುತ್ತದೆ ಎಂದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಹೆಣ್ಣು ಭ್ರೂಣ ಹತ್ಯೆ, ಲೈಂಗಿಕ ದೌರ್ಜನ್ಯ, ಬಾಲ್ಯ ವಿವಾಹ ಮುಂತಾದ ಸಾಮಾಜಿಕ ಪಿಡುಗುಗಳನ್ನು ತೊಡೆದು ಹಾಕಲು ಜ್ಞಾನ ಮತ್ತು ವಿದ್ಯೆ ಅಗತ್ಯ ಎಂದು ರಾಜ್ಯ ಉಚ್ಚ ನ್ಯಾಯಾಲಯದ ಹಿರಿಯ ನ್ಯಾಯಾಧೀಶರಾದ ಕೆ. ಸೋಮಶೇಖರ್ ಹೇಳಿದ್ದಾರೆ. ಮಂಡ್ಯ ಜಿಲ್ಲಾಡಳಿತದ ವತಿಯಿಂದ ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ನಿಷೇಧ, ಬಾಲ್ಯ ವಿವಾಹ ನಿಷೇಧ ಕಾಯ್ದೆ, ಬಾಲ ನ್ಯಾಯ ಕಾಯ್ದೆ ಹಾಗೂ ಲೈಂಗಿಕ ದೌರ್ಜನ್ಯದಿಂದ ಮಕ್ಕಳನ್ನು ಸಂರಕ್ಷಿಸುವ ಕಾಯ್ದೆ ಕುರಿತು ಆಯೋಜಿಸಲಾದ ಜಿಲ್ಲಾ ಮಟ್ಟದ ಬೃಹತ್ ತರಬೇತಿ ಕಾರ್ಯಗಾರ ಹಾಗೂ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಂವಿಧಾನದ ಅರಿವು ಇದ್ದಾಗ ಯಾರೂ ಕೂಡ ಅಪರಾಧವನ್ನು ಎಸಗಲು ಸಾಧ್ಯವಿಲ್ಲ. ಆದ್ದರಿಂದ ಸಂವಿಧಾನದ ಎಲ್ಲಾ ವಿಧಿಗಳನ್ನು ಅರ್ಥ ಮಾಡಿಕೊಂಡು ಜ್ಞಾನವನ್ನು ಬೆಳೆಸಿಕೊಳ್ಳಬೇಕು ಎಂದರು.

*******

ಕೇಂದ್ರ ಸರ್ಕಾರ, ರೈತರ ಬೆಳೆ ನಷ್ಟ ಸಮಸ್ಯೆಗಳನ್ನು ಅರ್ಥ ಮಾಡಿಕೊಳ್ಳುವ ಜೊತೆಗೆ ಅದನ್ನು ಗಂಭೀರವಾಗಿ ಪರಿಗಣಿಸಿ, ಪ್ರಧಾನಮಂತ್ರಿ ಫಸಲ್ ಭಿಮಾ ಯೋಜನೆಯಂತಹ ಮಹತ್ವದ ಯೋಜನೆಯನ್ನು ಜಾರಿ ಮಾಡಿ, ಒಂದೂವರೆ ಕೋಟಿ ರೈತರಿಗೆ 1.5 ಲಕ್ಷ ಕೋಟಿ ರೂಪಾಯಿಗಳಷ್ಟು ಬೆಳೆ ವಿಮೆ ನೀಡಿದೆ ಎಂದು ಸಂಸದ ಡಾಕ್ಟರ್ ಕೆ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಚೇಳೂರು ತಾಲ್ಲೂಕಿನ ಚಾಕವೇಲು ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅತಿ ಕಡಿಮೆ ದರದಲ್ಲಿ ಗುಣಮಟ್ಟದ ಔಷಧಗಳನ್ನು ಒದಗಿಸುವ ಜನೌಷಧಿ ಕೇಂದ್ರಗಳನ್ನು ದೇಶಾದ್ಯಂತ ತೆರೆಯಲಾಗಿದೆ. ಸ್ವಚ್ಛ ಭಾರತ್ ಯೋಜನೆಯಡಿ ವೈಯಕ್ತಿಕ ಶೌಚಾಲಗಳನ್ನು ನಿರ್ಮಿಸಿ, ಗ್ರಾಮೀಣ ಮತ್ತು ನಗರ ಪ್ರದೇಶಗಳ ಬಡವರು, ಮಧ್ಯಮವರ್ಗದ ಜನರ ಆರೋಗ್ಯ ಕಾಪಾಡುತ್ತಿದೆ ಎಂದರು.

*******

ಮಂಡ್ಯದಲ್ಲಿ ಡಿಸೆಂಬರ್ 20 ರಿಂದ 3 ದಿನಗಳ ಕಾಲ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ರಾಮನಗರ ತಾಲ್ಲೂಕಿನ ಗಡಿ ಪ್ರದೇಶದ ಕೂಟಗಲ್ ಹೋಬಳಿಯ  ಲಕ್ಷ್ಮೀಪುರ ಗ್ರಾಮದಲ್ಲಿ ಕನ್ನಡ ರಥ ಯಾತ್ರೆಯನ್ನು ನಿನ್ನೆ ಸ್ವಾಗತಿಸಿಕೊಂಡು ರಾಮನಗರ ಟೌನಿನ ಭುವನೇಶ್ವರಿ ದೇವಾಲಯದ ಮುಂಭಾಗ ಕನ್ನಡ ರಥಕ್ಕೆ ರಾಮನಗರ ತಾಲೂಕಿನ ತಹಸೀಲ್ದಾರ್ ಪುಷ್ಪನಮನ  ಸಲ್ಲಿಸಿದರು. ಅದ್ದೂರಿಯಾಗಿ ಕಲಾ ತಂಡಗಳೊಂದಿಗೆ ಮೆರವಣಿಗೆ ಮೂಲಕ ಕನ್ನಡ ಜ್ಯೋತಿ ರಥಯಾತ್ರೆಯು ನಗರದ ರಾಯರದೊಡ್ಡಿ ವೃತ್ತ, ಬಸ್ ನಿಲ್ದಾಣ ವೃತ್ತ, ಹಳೆ ಬಸ್ ನಿಲ್ದಾಣ ವೃತ್ತ, ಹಾಗೂ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು ನಂತರ ಬಿ.ಎಂ.ರಸ್ತೆ ಮೂಲಕ ಹಾರೋಹಳ್ಳಿಗೆ ಕನ್ನಡ ರಥಯಾತ್ರೆಯನ್ನು ಬಿಳ್ಕೊಡಲಾಯಿತು.

*******

ರಾಜ್ಯದ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಇಂದು ಮತ್ತು ನಾಳೆ ಭಾರಿ ಮಳೆಯಾಗುವ ನಿರೀಕ್ಷೆಯಿದ್ದು, ಭಾರತೀಯ ಹವಾಮಾನ ಇಲಾಖೆಯಿಂದ ಆರೆಂಜ್ ಅಲರ್ಟ್ ನೀಡಲಾಗಿದೆ ಎಂದು ರಾಜ್ಯ ನೈಸರ್ಗಿಕ ವಿಕೋಪ ಕೇಂದ್ರ ತಿಳಿಸಿದೆ. ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಗುಡುಗು ಸಿಡಿಲು ಸಹಿತ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಉತ್ತರ ಒಳನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ ಎಂದು ಹೇಳಿದೆ.

*******

ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತದಿಂದಾಗಿ ಫೆಂಗಲ್ ಚಂಡಮಾರುತ ಚನ್ನೈಗೆ ಅಪ್ಪಳಿಸಿರುವ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಳೆದ ಎರಡು ಮೂರು ದಿನಗಳಿಂದ ಮೋಡಕವಿದ ವಾತಾವರಣ ಮತ್ತು ಮಳೆಯಾಗುತ್ತಿರುವುದರಿಂದ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ. ಈ ರಜಾ ದಿನದ ಕಲಿಕಾ ಪ್ರಕ್ರಿಯೆಗಳನ್ನು ಮುಂದಿನ ಸರ್ಕಾರಿ ರಜೆ ದಿನಗಳಲ್ಲಿ ಸರಿದೂಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

*******

ಕೋಲಾರ ಜಿಲ್ಲೆಯಲ್ಲಿ ಮೂರು ದಿನಗಳಿಂದ ಮೋಡ ಕವಿದ ವಾತಾವರಣ ಹಾಗೂ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಇಂದು ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಅಕ್ರಂಪಾಷ ಆದೇಶಿಸಿದ್ದಾರೆ.

*******

ಉತ್ತರಕನ್ನಡ ಜಿಲ್ಲೆಯ ಯಾವುದೇ ಭಾಗಗಳಲ್ಲಿ ಭೂಕಂಪನ ಸಂಭವಿಸಿಲ್ಲ. ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಉತ್ತರಕನ್ನಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿರುವ ಅವರು, ಜಿಲ್ಲೆಯ ಶಿರಸಿ, ಸಿದ್ದಾಪುರ, ಯಲ್ಲಾಪುರ ತಾಲ್ಲೂಕು ವ್ಯಾಪ್ತಿಯಲ್ಲಿ ಭೂಮಿ ಕಂಪಿಸಿದ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪ್ರಚಾರಗೊಂಡ ಸಂದೇಶದ ಕುರಿತು ಜಿಲ್ಲಾಡಳಿತ, ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರವನ್ನು ಸಂಪರ್ಕಿಸಿ ಮಾಹಿತಿ ಕೋರಲಾಗಿ, ಅಂತಹ ಯಾವುದೇ ಸಂದೇಶಗಳು ರಿಕ್ಟರ್ ಮಾಪಕದಲ್ಲಿ ದಾಖಲಾಗಿದ್ದು ಕಂಡುಬಂದಿಲ್ಲವೆಂದು ತಿಳಿಸಿದ್ದಾರೆ ಎಂದರು.

*******

## ಈಗ ಸಂಕ್ಷಿಪ್ತ ಸುದ್ದಿಗಳು

ಕಿನ್ನಾಳ ಕುಸುರಿ ಕಲೆಯ ಕಲಾವಿದರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಸಣ್ಣ ರಂಗಪ್ಪ ಶೀನಪ್ಪ ಚಿತ್ರಗಾರ ನಿನ್ನೆ ಕೊಪ್ಪಳ ಜಿಲ್ಲೆಯ ಕಿನ್ನಾಳ ಗ್ರಾಮದಲ್ಲಿ ನಿಧನರಾಗಿದ್ದಾರೆ.

*******

ಕೋಲಾರ ತಾಲ್ಲೂಕು ಮಲ್ಲಸಂದ್ರ ಗ್ರಾಮದಲ್ಲಿ ಕೋಟ್ಯಂತರ ರೂಪಾಯಿ ಮೌಲ್ಯದ ಶ್ರೀಗಂಧ ಮರ ಕಳ್ಳತನವಾಗಿದ್ದು, ವೇಮಗಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

*******

ಕಾರ್ತಿಕ ಮಾಸದ ಅಮಾವಾಸ್ಯೆ ಅಂಗವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧ ದೇವಾಲಯಗಳಲ್ಲಿ ವಿಶೇಷ ಅಲಂಕಾರ ಪೂಜಾ ಕಾರ್ಯಕ್ರಮಗಳು ಹಾಗೂ ಲಕ್ಷ ದೀಪೋತ್ಸವ ಆಯೋಜಿಸಲಾಗಿತ್ತು.

*******